## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2021–22ನೇ ಶೈಕ್ಷಣಿಕ ಸಾಲಿನಿಂದ ಜಿ.ಎಂ ಇನ್ಸಿಟ್ಯೂಟ್ ಆಫ್ ಫಾರ್ಮಸೂಟಿಕಲ್ ಅಂಡ್ ಸೈನ್ಸಸ್ ರಿಸರ್ಚ್, ದಾವಣಗೆರೆ, ಸಂಸ್ಥೆಯ ಬಿ.ಫಾರ್ಮಸಿ ಕೋರ್ಸಿನ ಪ್ರವೇಶಮಿತಿ ಹೆಚ್ಚಿಸುವ ಬಗ್ಗೆ.

**ಓದಲಾಗಿದೆ:**
1. ಕುಲಸಚಿವರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಇವರ ಪತ್ರ ಸಂಖ್ಯೆ:ಎಸಿಎ/ಎಎಫ್ಎಫ್/ಪಿಹೆಚ್–130/2021–22, ದಿನಾಂಕ: 14.06.2021.
2. ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ:ಔನಿಇ/13/ಯೋಜನೆ/2021–22, ದಿನಾಂಕ:26.08.2021.

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರ.ಸಂ (1)ರ ಪತ್ರದಲ್ಲಿ, ಕುಲಸಚಿವರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರು ಜಿ.ಎಂ ಇನ್ಸಿಟ್ಯೂಟ್ ಆಫ್ ಫಾರ್ಮಸೂಟಿಕಲ್ ಸೈನ್ಸಸ್ ಅಂಡ್ ರಿಸರ್ಚ್, ದಾವಣಗೆರೆ, ಸಂಸ್ಥೆಗೆ ಬಿ.ಫಾರ್ಮಸಿ ಕೋರ್ಸಿನ ಪ್ರವೇಶಮಿತಿ ಹೆಚ್ಚಿಸಲು ಅನುಮತಿ ನೀಡುವ ಸಂಬಂಧ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ ಹಾಗೂ ಸಿಂಡಿಕೇಟ್ ಸಭೆಗಳಲ್ಲಿ ಅನುಮೋದಿಸಿದ್ದು, ಸದರಿ ಮಹಾವಿದ್ಯಾಲಯದ ಬಿ.ಫಾರ್ಮಸಿ ಕೋರ್ಸಿನ ಪ್ರವೇಶಮಿತಿಯನ್ನು 60 ರಿಂದ 100ಕ್ಕೆ ಹೆಚ್ಚಿಸಬಹುದಾಗಿರುತ್ತದೆಂದು ಅಭಿಪ್ರಾಯ ನೀಡಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ (2)ರ ಪತ್ರದಲ್ಲಿ, ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ಇವರು ಜಿ.ಎಂ ಇನ್ಸಿಟ್ಯೂಟ್ ಆಫ್ ಫಾರ್ಮಸೂಟಿಕಲ್ ಸೈನ್ಸಸ್ ಅಂಡ್ ರಿಸರ್ಚ್, ದಾವಣಗೆರೆ ಸಂಸ್ಥೆಗೆ ಬಿ.ಫಾರ್ಮಸಿ ಕೋರ್ಸಿನ ಪ್ರವೇಶ ಮಿತಿಯನ್ನು ಹೆಚ್ಚಿಸಲು ಅನುಮತಿ ನೀಡುವುದಕ್ಕೆ ಸಂಬಂಧಿಸಿದಂತೆ ಪ್ರಾಂಶುಪಾಲರು, ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯ, ಬೆಂಗಳೂರು ಇವರು ಸಲ್ಲಿಸಿರುವ ಪರಿವೀಕ್ಷಣಾ ವರದಿಯನುಸಾರ, ಸದರಿ ಸಂಸ್ಥೆಯು ನಿಯಮಾನುಸಾರ ಅಗತ್ಯ ಮೂಲಭೂತ ಸೌಕರ್ಯಗಳನ್ನು ಹೊಂದಿರುವುದರಿಂದ, ಭಾರತೀಯ ಫಾರ್ಮಸಿ ಪರಿಷತ್ತಿನ ಅನುಮೋದನೆ ಪಡೆಯುವ ಷರತ್ತಿನೊಂದಿಗೆ ಸದರಿ ಸಂಸ್ಥೆಗೆ ಬಿ.ಫಾರ್ಮಸಿ ಕೋರ್ಸಿನ ಪ್ರವೇಶ ಮಿತಿಯನ್ನು 60 ರಿಂದ 100ಕ್ಕೆ ಹೆಚ್ಚಿಸಲು ಅನುಮತಿ ನೀಡಬಹುದಾಗಿದೆ ಎಂದು ಅಭಿಪ್ರಾಯಿಸಿರುತ್ತಾರೆ.

ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಮತ್ತು ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ ಇವರ ಪತ್ರಗಳು ಮತ್ತು ಲಭ್ಯವಿರುವ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು, ಜಿ.ಎಂ ಇನ್ಸಿಟ್ಯೂಟ್ ಆಫ್ ಫಾರ್ಮಸೂಟಿಕಲ್ ಸೈನ್ಸಸ್ ಅಂಡ್ ರಿಸರ್ಚ್, ದಾವಣಗೆರೆ ಸಂಸ್ಥೆಗೆ ಬಿ.ಫಾರ್ಮಸಿ ಕೋರ್ಸಿನ ಪ್ರವೇಶ ಮಿತಿಯನ್ನು 2021–2022ನೇ ಶೈಕ್ಷಣಿಕ ಸಾಲಿಗೆ 60 ರಿಂದ 100ಕ್ಕೆ ಹೆಚ್ಚಿಸಲು ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ ಹಾಗೂ ಅಗತ್ಯವಿರುವ ಇತರೆ ಸಕ್ಷಮ ಪ್ರಾಧಿಕಾರಗಳಿಂದ ಅನುಮೋದನೆಯನ್ನು ಪಡೆಯುವ

SRG

ಷರತ್ತಿಗೊಳಪಟ್ಟು ಅನುಮತಿ ನೀಡಲು ನಿರ್ಧರಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಆಕುಕ 43 ಪಿಟಿಡಿ 2021, ಬೆಂಗಳೂರು, ದಿನಾಂಕ: 02.12.2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಜಿ.ಎಂ ಇನ್ಸಿಟ್ಯೂಟ್ ಆಫ್ ಫಾರ್ಮಸೂಟಿಕಲ್ ಸೈನ್ಸಸ್ ಅಂಡ್ ರಿಸರ್ಚ್, ಪಿ.ಬಿ ರೋಡ್, ಜಿಎಂಐಟಿ ಕ್ಯಾಂಪಸ್, ದಾವಣಗೆರೆ ಸಂಸ್ಥೆಗೆ 2021-22ನೇ ಶೈಕ್ಷಣಿಕ ಸಾಲಿನಿಂದ ಬಿ.ಫಾರ್ಮಸಿ ಕೋರ್ಸಿನ ಪ್ರವೇಶ ಮಿತಿಯನ್ನು 60 ರಿಂದ 100ಕ್ಕೆ ಹೆಚ್ಚಿಸಲು ಈ ಕೆಳಕಂಡ ಷರತ್ತಿಗೆಳಿಗೊಳಪಟ್ಟು ಸರ್ಕಾರದ ಅನುಮತಿ ನೀಡಿ ಆದೇಶಿಸಿದೆ.

1. ಪ್ರಸ್ತಾಪಿಸಿರುವ ಬಿ.ಫಾರ್ಮಸಿ ಕಾಲೇಜು/ಕೋರ್ಸ್‌ನ್ನು ಹೊಸದಾಗಿ ಪ್ರಾರಂಭಿಸುವ ಮೊದಲು ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ, ನವದೆಹಲಿ ಮತ್ತು ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ ಇವರಿಂದ ಹಾಗೂ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅನುಮೋದನೆ/ ಅನುಮತಿಯನ್ನು ಪಡೆಯತಕ್ಕದ್ದು.
2. ಕಾಲೇಜನ್ನು ಪ್ರಾರಂಭಿಸುವ ಮುನ್ನ ಅಗತ್ಯವಿರುವ ಎಲ್ಲಾ ಮೂಲ ಸೌಲಭ್ಯಗಳು ಹಾಗೂ ಸಿಬ್ಬಂದಿಯನ್ನು ಹೊಂದಿರತಕ್ಕದ್ದು.
3. ಆರ್.ಜಿ.ಯು.ಹೆಚ್.ಎಸ್ ಶಿಫಾರಸ್ಸಿನಂತೆ ಬೋಧಕ ಸಿಬ್ಬಂದಿಯ ವೇತನವನ್ನು ಎ.ಐ.ಸಿ.ಟಿ.ಇಯ ವೇತನಕ್ಕೆ ಅನುಗುಣವಾಗ್ಗಿ ನಿಗದಿಪಡಿಸತಕ್ಕದ್ದು.
4. ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ ಪ್ರವೇಶಾವಕಾಶಕ್ಕೆ ಹಾಲಿ ಜಾರಿಯಲ್ಲಿರುವ ನಿಯಮಗಳಿಗೆ ಸಂಸ್ಥೆಯು ಬದ್ಧವಾಗಿರಬೇಕು.
5. ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು/ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ ನಿಗದಿಪಡಿಸಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
6. ರಾಜ್ಯ/ಕೇಂದ್ರ ಸರ್ಕಾರವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಪಾಲಿಸತಕ್ಕದ್ದು.
7. ಈ ಕಾಲೇಜಿಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಟ್ಟಿರುತ್ತದೆ.
8. ಸರ್ಕಾರ/ಪ್ರಾಧಿಕಾರದ ಪೂರ್ವಾನುಮತಿಯಿಲ್ಲದೆ ಯಾವುದೇ ಕಾರಣಕ್ಕೂ ಕಾಲೇಜಿನ ಹೆಸರು ಮತ್ತು ವಿಳಾಸವನ್ನು ಬದಲಾಯಿಸುವಂತಿಲ್ಲ.
9. ಸರ್ಕಾರ ವಿಧಿಸಿರುವ ಮೇಲ್ಕಂಡ ಯಾವುದೇ ಒಂದು ಷರತ್ತನ್ನು ಉಲ್ಲಂಘಿಸಿದ್ದಲ್ಲಿ ಸಂಯೋಜನೆ/ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

SR Gorwar
02/12/2021

(ಶೈಲಾ ಆರ್.ಗೊರವರ)
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಭಾವೈಪ ಮತ್ತು ಸಮನ್ವಯ)

ಇವರಿಗೆ:

1. The Registrar-cum-Secretary, Pharmacy Council of India, P.B. No.7020, Combined Councils Building, Kotla Road, Aiwan-E-Ghalib Marg, New Delhi-110 002.
2. The Member Secretary, All India Council for Technical Education, Nelson Mandela Marg, Vasanth Kunj, New Delhi – 110 067

3. ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
4. ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ ಟಿ.ಬ್ಲಾಕ್, ಜಯನಗರ, ಬೆಂಗಳೂರು-41.
5. ಪ್ರಾಂಶುಪಾಲರು, ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯ, ಪಿ.ಕಾಳಿಂಗರಾವ್ ರಸ್ತೆ, ಬೆಂಗಳೂರು-560 027.
6. ಪ್ರಾಂಶುಪಾಲರು, ಜಿ.ಎಂ ಇನ್ಸಿಟ್ಯೂಟ್ ಆಫ್ ಫಾರ್ಮಸೂಟಿಕಲ್ ಸೈನ್ಸ್ ಅಂಡ್ ರಿಸರ್ಚ್,ಪಿ.ಬಿ ರೋಡ್,ಜಿಎಂಐಟಿ ಕ್ಯಾಂಪಸ್, ದಾವಣಗೆರೆ

<u>ಪ್ರತಿಗಳು:-</u>

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
3. ಸರ್ಕಾರದ ಉಪ ಕಾರ್ಯದರ್ಶಿ-3ರವರ ಆಪ್ತ ಸಹಾಯಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
4. ಶಾಖೆಯ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀಶೈಲ ಎಜುಕೇಷನಲ್ ಟ್ರಸ್ಟ್ (ರಿ), ದಾವಣಗೆರೆ ಇವರು ಜಿ.ಎಂ. ಇನ್ಸ್ಟಿಟ್ಯೂಟ್ ಆಫ್ ಫಾರ್ಮಸ್ಯುಟಿಕಲ್ ಸೈನ್ಸ್ ಎಂಬ ಹೆಸರಿನಲ್ಲಿ ಹೊಸದಾಗಿ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ:
1. ಕಾರ್ಯದರ್ಶಿ, ಶ್ರೀಶೈಲ ಎಜುಕೇಷನಲ್ ಟ್ರಸ್ಟ್ (ರಿ), ದಾವಣಗೆರೆ ಇವರ ಮನವಿ ದಿನಾಂಕ:22.06.2018.
2. ಔಷಧ ನಿಯಂತ್ರಕರು (ಪ್ರ), ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ಇವರ ವರದಿ ಸಂಖ್ಯೆ:ಔನಿಇ/66/ಯೋಜನೆ/2018-19, ದಿನಾಂಕ: 03.05.2019.
3. ದಿನಾಂಕ:04.05.2019ರಂದು ನಡೆದ ಉನ್ನತ ಮಟ್ಟದ ಸಮಿತಿ ಸಭೆಯ ನಡವಳಿಗಳು.

***

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಸಂ (1)ರ ಮನವಿ ಪತ್ರದಲ್ಲಿ, ಕಾರ್ಯದರ್ಶಿ, ಶ್ರೀಶೈಲ ಎಜುಕೇಷನಲ್ ಟ್ರಸ್ಟ್ (ರಿ), ಭೀಮಸಮುದ್ರ, ದಾವಣಗೆರೆ ಇವರು ತಮ್ಮ ಟ್ರಸ್ಟ್ ವತಿಯಿಂದ ದಾವಣಗೆರೆಯಲ್ಲಿ ಪಿ.ಯು.ಸಿ. ಇಂಜಿನಿಯರಿಂಗ್ ಮತ್ತು ಎಂ.ಬಿ.ಎ. ಕಾಲೇಜುಗಳನ್ನು ನಡೆಸುತ್ತಿದ್ದು, ಪ್ರಸ್ತುತ ಫಾರ್ಮಸಿ ಕೋರ್ಸ್‌ಗಳನ್ನು ಪ್ರಾರಂಭಿಸಲು ಉದ್ದೇಶಿಸಿದ್ದು, ಇದಕ್ಕೆ ನಿಯಮಾನುಸಾರ ಅಗತ್ಯವಾದ ಸೌಲಭ್ಯಗಳನ್ನು ಹೊಂದಿರುವುದರಿಂದ, ಜಿ.ಎಂ. ಇನ್ಸ್ಟಿಟ್ಯೂಟ್ ಆಫ್ ಫಾರ್ಮಸ್ಯೂಟಿಕಲ್ ಸೈನ್ಸ್ & ರೀಸರ್ಚ್ ಎಂಬ ಹೆಸರಿನಲ್ಲಿ ಹೊಸದಾಗಿ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವಂತೆ ಸರ್ಕಾರವನ್ನು ಕೋರಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ. (2)ರ ವರದಿಯಲ್ಲಿ, ಔಷಧ ನಿಯಂತ್ರಕರು (ಪ್ರ), ರಾಜ್ಯ ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ಶ್ರೀಶೈಲ ಎಜುಕೇಷನಲ್ ಟ್ರಸ್ಟ್ (ರಿ), ದಾವಣಗೆರೆ ಇವರು ಜಿ.ಎಂ. ಇನ್ಸ್ಟಿಟ್ಯೂಟ್ ಆಫ್ ಫಾರ್ಮಸ್ಯೂಟಿಕಲ್ ಸೈನ್ಸ್ & ರೀಸರ್ಚ್ ಎಂಬ ಹೆಸರಿನಲ್ಲಿ ಹೊಸದಾಗಿ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವ ವಿಷಯಕ್ಕೆ ಸಂಬಂಧಿಸಿದಂತೆ, ಸದಸ್ಯ ಕಾರ್ಯದರ್ಶಿ, ಪರೀಕ್ಷಾ ಪ್ರಾಧಿಕಾರ ಮಂಡಳಿ, ಬೆಂಗಳೂರು ಇವರು ಸಲ್ಲಿಸಿರುವ ಪರಿವೀಕ್ಷಣಾ ವರದಿಯಂತೆ ಸದರಿ ಸಂಸ್ಥೆಯು ಪಿ.ಬಿ. ಸಂಖ್ಯೆ: 04, ಸರ್ವೆ ನಂ. 17/01, 17/2, 20/1, 20/2, 20/3 ಮತ್ತು 20/4, ಪಿ.ಬಿ. ಜಿ.ಎಂ.ಐ.ಟಿ. ಕ್ಯಾಂಪಸ್ ರಸ್ತೆ, ಕರೂರು ಗ್ರಾಮ, ಕಸಬಾ ಹೋಬಳಿ, ದಾವಣಗೆರ ತಾಲ್ಲೂಕು ಮತ್ತು ಜಿಲ್ಲೆ ಇಲ್ಲಿ ಸ್ವಂತ ಕಟ್ಟಡವನ್ನು ಹೊಂದಿದ್ದು, ಸದರಿ ಕಟ್ಟಡವು ಡಿ.ಫಾರ್ಮಸಿ ಕೋರ್ಸ್ ನಡೆಸಲು ಸೂಕ್ತವಾಗಿದ್ದು, 60 ವಿದ್ಯಾರ್ಥಿಗಳ ಪ್ರಥಮ ಡಿ.ಫಾರ್ಮಸಿ ತರಗತಿಗಳನ್ನು ಚಾಲನೆ ಮಾಡಲು ಅಗತ್ಯವಿರುವ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಹೊಂದಿರುವುದರಿಂದ, ಇವರಿಗೆ 2019-20ನೇ ಶೈಕ್ಷಣಿಕ ಸಾಲಿನಿಂದ ಹೊಸದಾಗಿ ಪ್ರಥಮ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಸೂಕ್ತ ಷರತ್ತುಗಳನ್ನು ವಿಧಿಸಿ ಅನುಮತಿ ನೀಡಬಹುದಾಗಿದೆ ಎಂಬ ಅಭಿಪ್ರಾಯವನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ (3)ರ ಉನ್ನತ ಮಟ್ಟದ ಸಮಿತಿ ಸಭೆಯಲ್ಲಿ ಈ ಸಂಸ್ಥೆಗೆ 60 ವಿದ್ಯಾರ್ಥಿಗಳ ಪ್ರವೇಶಮಿತಿಯಲ್ಲಿ 2019-20ನೇ ಶೈಕ್ಷಣಿಕ ಸಾಲಿನಿಂದ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡಲು ಶಿಫಾರಸು ಮಾಡಲಾಗಿದೆ.

. . . . 2

ಔಷಧ ನಿಯಂತ್ರಕರ (ಪ್ರ) ವರದಿ ಮತ್ತು ಲಭ್ಯವಿರುವ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು, ಶ್ರೀಶೈಲ ಎಜುಕೇಷನಲ್ ಟ್ರಸ್ಟ್ (ರಿ), ದಾವಣಗೆರೆ ಇವರು ಜಿ.ಎಂ. ಇನ್‌ಸ್ಟಿಟ್ಯೂಟ್ ಆಫ್ ಫಾರ್ಮಸ್ಯುಟಿಕಲ್ ಸೈನ್ಸ್ ಅಂಡ್ ರೀಸರ್ಚ್ ಎಂಬ ಹೆಸರಿನಲ್ಲಿ 2019-20ನೇ ಶೈಕ್ಷಣಿಕ ಸಾಲಿನಿಂದ 60 ವಿದ್ಯಾರ್ಥಿಗಳ ಪ್ರವೇಶಮಿತಿಯೊಂದಿಗೆ ಪ್ರಥಮ ಡಿ.ಫಾರ್ಮಸಿ ಕೋರ್ಸ್‌ನ್ನು ಹೊಸದಾಗಿ ಪ್ರಾರಂಭಿಸಲು ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ, ನವದೆಹಲಿ ಹಾಗೂ ಅಗತ್ಯವಿರುವ ಇತರೆ ಸಕ್ಷಮ ಪ್ರಾಧಿಕಾರಗಳಿಂದ ಅನುಮೋದನೆಯನ್ನು ಪಡೆಯುವ ಷರತ್ತಿಗೊಳಪಟ್ಟು ಅನುಮತಿ ನೀಡಲು ನಿರ್ಧರಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ:ಆಕುಕ 130 ಪಿಟಿಡಿ 2018, ಬೆಂಗಳೂರು, ದಿನಾಂಕ: 13.09.2019.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀಶೈಲ ಎಜುಕೇಷನಲ್ ಟ್ರಸ್ಟ್ (ರಿ), ಭೀಮಸಮುದ್ರ, ದಾವಣಗೆರೆ ಇವರು ಪಿ.ಬಿ. ಸಂಖ್ಯೆ: 04, ಸರ್ವೆ ನಂ. 17/01, 17/2, 20/1, 20/2, 20/3 ಮತ್ತು 20/4, ಪಿ.ಬಿ. ಜಿ.ಎಂ.ಐ.ಟಿ. ಕ್ಯಾಂಪಸ್ ರಸ್ತೆ, ಕರೂರು ಗ್ರಾಮ, ಕಸಬಾ ಹೋಬಳಿ, ದಾವಣಗೆರ ತಾಲ್ಲೂಕು ಮತ್ತು ಜಿಲ್ಲೆ ಇಲ್ಲಿ 2019-20ನೇ ಶೈಕ್ಷಣಿಕ ಸಾಲಿನಿಂದ 60 (ಅರವತ್ತು) ವಿದ್ಯಾರ್ಥಿಗಳ ಪ್ರವೇಶ ಮಿತಿಯೊಂದಿಗೆ ಜಿ.ಎಂ. ಇನ್‌ಸ್ಟಿಟ್ಯೂಟ್ ಆಫ್ ಫಾರ್ಮಸ್ಯುಟಿಕಲ್ ಸೈನ್ಸ್ ಅಂಡ್ ರೀಸರ್ಚ್ ಎಂಬ ಹೆಸರಿನಲ್ಲಿ ಹೊಸದಾಗಿ ಪ್ರಥಮ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮತಿ ನೀಡಲಾಗಿದೆ.

1. ಪ್ರಸ್ತಾಪಿಸಿರುವ ಡಿ.ಫಾರ್ಮಸಿ ಕಾಲೇಜು/ಕೋರ್ಸ್‌ನ್ನು ಹೊಸದಾಗಿ ಪ್ರಾರಂಭಿಸಲು ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ, ನವದೆಹಲಿ ಇವರಿಂದ ಅನುಮೋದನೆಯನ್ನು ಪಡೆಯತಕ್ಕದ್ದು.
2. ಕಾಲೇಜನ್ನು ಪ್ರಾರಂಭಿಸುವ ಮುನ್ನ ಅಗತ್ಯವಿರುವ ಮೂಲ ಸೌಲಭ್ಯಗಳು ಹಾಗೂ ಸಿಬ್ಬಂದಿಯನ್ನು ಹೊಂದಿರತಕ್ಕದ್ದು.
3. ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ ಪ್ರವೇಶಾವಕಾಶಕ್ಕೆ ಹಾಲಿ ಜಾರಿಯಲ್ಲಿರುವ ನಿಯಮಗಳಿಗೆ ಸಂಸ್ಥೆಯು ಬದ್ಧವಾಗಿರಬೇಕು.
4. ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು/ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ ನಿಗದಿಪಡಿಸಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
5. ರಾಜ್ಯ/ಕೇಂದ್ರ ಸರ್ಕಾರವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಪಾಲಿಸತಕ್ಕದ್ದು.
6. ಈ ಕಾಲೇಜಿಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಟ್ಟಿರುತ್ತದೆ.
7. ಸರ್ಕಾರ/ಪ್ರಾಧಿಕಾರದ ಪೂರ್ವಾನುಮತಿಯಿಲ್ಲದೆ ಯಾವುದೇ ಕಾರಣಕ್ಕೂ ಕಾಲೇಜಿನ ಹೆಸರು ಮತ್ತು ವಿಳಾಸವನ್ನು ಬದಲಾಯಿಸುವಂತಿಲ್ಲ.
8. ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸುವ ಕೋರ್ಸ್‌ನ ಶುಲ್ಕಗಳನ್ನು ಮಾತ್ರ ವಿದ್ಯಾರ್ಥಿಗಳಿಂದ ಪಡೆಯತಕ್ಕದ್ದು ಮತ್ತು ಸಕ್ಷಮ ಪ್ರಾಧಿಕಾರದಿಂದ ಮಂಜೂರಾದ ಸೀಟುಗಳಲ್ಲಿ ಕಾಲಕಾಲಕ್ಕೆ ಸರ್ಕಾರವು ನಿಗದಿಪಡಿಸುವ ಅನುಪಾತದಲ್ಲಿ ಸರ್ಕಾರಕ್ಕೆ ಸೀಟುಗಳನ್ನು ಬಿಟ್ಟುಕೊಡತಕ್ಕದ್ದು.

. . . 3

9. ತರಗತಿ ಪ್ರಾರಂಭಿಸುವ ಮುನ್ನ ಮಲ್ಟಿಮೀಡಿಯಾ ಪ್ರೊಜೆಕ್ಟರ್‌ನ್ನು ಒದಗಿಸುವುದು.
10. ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ ಇವರು ಉನ್ನತ ಮಟ್ಟದ ಸಮಿತಿ ಸಭೆಯ ನಿರ್ಣಯದಂತೆ ಡಿ.ಫಾರ್ಮಸಿ ಕೋರ್ಸ್‌ನ್ನು ಪ್ರಾರಂಭಿಸಲು ಅಗತ್ಯವಿರುವ ಮೊತ್ತವನ್ನು ಸಂಸ್ಥೆಯು ಬ್ಯಾಂಕ್ ಖಾತೆಯಲ್ಲಿ ಹೊಂದಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳತಕ್ಕದ್ದು.
11. ಸರ್ಕಾರ ವಿಧಿಸಿರುವ ಮೇಲ್ಕಂಡ ಯಾವುದೇ ಒಂದು ಷರತ್ತನ್ನು ಉಲ್ಲಂಘಿಸಿದ್ದಲ್ಲಿ ಸಂಯೋಜನೆ/ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್.ಪುಷ್ಪ)
ಸರ್ಕಾರದ ಉಪ ಕಾರ್ಯದರ್ಶಿ-3,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

ಇವರಿಗೆ:

1) ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
2) ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ ಟಿ.ಬ್ಲಾಕ್, ಜಯನಗರ, ಬೆಂಗಳೂರು.
3) ಸದಸ್ಯ ಕಾರ್ಯದರ್ಶಿ, ಪರೀಕ್ಷಾ ಪ್ರಾಧಿಕಾರ ಮಂಡಳಿ, ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯ, ಪಿ. ಕಾಳಿಂಗರಾವ್ ರಸ್ತೆ, ಬೆಂಗಳೂರು-560 027.
4) ಕಾರ್ಯದರ್ಶಿ, ಶ್ರೀಶೈಲ ಎಜುಕೇಷನಲ್ ಟ್ರಸ್ಟ್ (ರಿ), ಭೀಮಸಮುದ್ರ, ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ-577 520.

ಪ್ರತಿಗಳು:-

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು-1.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಪತ್ರಾಂಕಿತ ಆಪ್ತ ಸಹಾಯಕರಿಗೆ.
3. ಸರ್ಕಾರದ ಉಪ ಕಾರ್ಯದರ್ಶಿ-3, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರಿಗೆ.
4. ಶಾಖೆಯ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.